**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.**

# ಕ್ರಿ ಮೊ ಸಂಖ್ಯೆ 858/2017

**ಪಿರ್ಯಾದಿ** : ರಾಜ್ಯದ ಪರವಾಗಿ ಲಿಂಗದಹಳ್ಳಿ ಪೊಲೀಸರು

**- ವಿರುದ್ಧ -**

**ಆರೋಪಿ/ತರು:**

1) ಗಿರೀಶ ಬಿನ್ ಹನುಮಂತಯ್ಯ, 34 ವರ್ಷ,
2) ರವಿ ಬಿನ್ ನರಸಿಂಹಯ್ಯ, 21 ವರ್ಷ,
3) ಹನುಮಂತ ಬಿನ್ ನಾಗರಾಜ, 24 ವರ್ಷ,
4) ಕುಮಾರ ಬಿನ್ ನರಸಿಂಹಯ್ಯ, 26 ವರ್ಷ,
5) ಶ್ರೀಮತಿ ಮಂಗಳ ಕೋಂ ರಾಮು, 28 ವರ್ಷ,

ಎಲ್ಲರೂ ವ್ಯವಸಾಯಗಾರರು, ವಾಸ: ನಂದಿಬಟ್ಟಲು ಕಾಲೋನಿ, ಲಿಂಗದಹಳ್ಳಿ ಹೋಬಳಿ, ತರೀಕೆರೆ ತಾಲ್ಲೂಕು.

**-:ದೋಷಾರೋಪಣೆ:-**

ಶ್ರೀಮತಿ ಊರ್ಮಿಳ.ವಿ., ಬಿ.ಎ.ಎಲ್, ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ ಆದ ನಾನು ನಿಮ್ಮ ವಿರುದ್ದ ಮಾಡುವ ದೋಷಾರೋಪಣೆಗಳೇನೆಂದರೆ:-

ದಿನಾಂಕ 09.07.2017 ರಂದು ಸಂಜೆ 04.00 ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೊಲೀಸ್ ಠಾಣಾ ಸರಹದ್ದಿನ ನಂದಿಬಟ್ಟಲು ಕಾಲೋನಿಯಲ್ಲಿ ಆರೋಪಿತರು ಚಾಸಾ-1 ಲಕ್ಷ್ಮಿಯವರ ಮನೆಯ ಹತ್ತಿರದ ರಸ್ತೆಯಲ್ಲಿ ನಿಂತು ಮಾತನಾಡುತ್ತಿರುವಾಗ, ಚಾಸಾ-1 ಮತ್ತು ಚಾಸಾ-2 ಚಿಕ್ಕರಂಗಯ್ಯರವರು 1 ನೇ ಆರೋಪಿಯಾದ ನಿಮ್ಮ ಬಳಿ ಎಸ್ಟೇಟಿನಲ್ಲಿ ಕೆಲಸ ಮಾಡಿದ ಕೂಲಿ ಹಣವನ್ನು ಕೇಳಿದಾಗ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ಮತ್ತು 2 ರವರಿಗೆ ನಿಮಗೆ ಯಾವ ಹಣ ಕೊಡಬೇಕು ಬೇರ್ವಸಿಗಳಾ, ಹಲ್ಕಾಗಳ ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಎರಡನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ, 1 ನೇ ಆರೋಪಿಯಾದ ನೀವು ದೊಣ್ಣೆಯಿಂದ ಚಾಸಾ-1 ರವರ ಬಲಕೈಗೆ ಹೊಡೆದು ಸಾಮಾನ್ಯ ಸ್ವರೂಪದ

ಗಾಯವನ್ನುಂಟು ಮಾಡಿದ್ದು, ಹಾಗೂ ಚಾಸಾ-2 ರವರ ಬಲಭುಜಕ್ಕೆ ದೊಣ್ಣೆಯಿಂದ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಮೂರನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ 1 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ಸಾರ್ವಜನಿಕ ಸ್ಥಳದಲ್ಲಿ ಅಪರಾಧಿಕ ಬಲಪ್ರಯೋಗ ಮಾಡಿ ಚಾಸಾ-1 ರವರ ಮಾನಕ್ಕೆ ಧಕ್ಕೆಯನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 354 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನಾಲ್ಕನೇಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಮನೆಯ ಒಳಗೆ ಅತಿಕ್ರಮ ಪ್ರವೇಶ ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 447 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ಕೊನೆಯದಾಗಿ ಅದೇ ದಿನ, ಅದೇ ಸಮಯ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಮನೆಯ ಒಳಗೆ ಅತಿಕ್ರಮ ಪ್ರವೇಶ ಮಾಡಿ ಮನೆಯಲ್ಲಿದ್ದ ನೀರಿನ ಪ್ಲಾಸ್ಟಿಕ್ ಕೊಡಗಳು, ಅಲ್ಯುಮಿನಿಯಂ ಪಾತ್ರೆಗಳನ್ನು ಜಜ್ಜಿ ಹಾಗೂ ಮನೆಯ ಹೆಂಚುಗಳನ್ನು ಹೊಡೆದು ಹಾಕಿ ಚಾಸಾ-1 ರವರಿಗೆ ಸುಮಾರು ರೂ.2,000/- ದಷ್ಟು ನಷ್ಟವನ್ನುಂಟು ಮಾಡಿದ್ದು, ಆದಕಾರಣ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ 427 ಸಹವಾಚಕ ಕಲಂ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

ನೀವು ಸದರಿ ಆರೋಪದ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗತಕ್ಕುದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕ : 13.03.2024

**ಸಹಿ**

**(ಊರ್ಮಿಳ.ವಿ)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.**